೧೯೮೮ನೇ ಇಸವಿಯ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 3) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ :

"೧೯೮೮ನೇ ಇಸವಿಯ ಕರ್ನಾಟಕ ಧನ ವಿನಿಯೋಗ (ಸಂಖ್ಯೆ ೩) ವಿಧೇಯಕವನ್ನು ಪರ್ಯಾಲೋಚಿಸುವುದು."

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು)

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ೨ ರಿಂದ ೩

ಅಧ್ಯಕ್ಷರು.—"ಖಂಡ ೨ ರಿಂದ ೩, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರತಕ್ಕದೆ."

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು)

(ಖಂಡ ೨ ಮತ್ತು ೩ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ ೧ ಇತ್ಯಾದಿ :

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ :

"ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್ (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು).—

"೧೯೮೮ನೇ ಇಸವಿಯ ಕರ್ನಾಟಕ ಧನ ವಿನಿಯೋಗ (ಸಂಖ್ಯೆ ೩) ಮಸೂದೆಯನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ :

"೧೯೮೮ನೇ ಇಸವಿಯ ಕರ್ನಾಟಕ ಧನ ವಿನಿಯೋಗ (ಸಂಖ್ಯೆ ೩) ಮಸೂದೆಯನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.